# All India Radio: Bangalore
# Regional Bulletin In Kannada
# 30.03.2025 / 2.30 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

****************

ಮುಖ್ಯಾಂಶಗಳು

೧. ಬೇಸಿಗೆ ರಜೆಯ ಅನುಭವ ಹಂಚಿಕೊಳ್ಳಲು ಪ್ರಧಾನಮಂತ್ರಿ ನರೇಂದ್ರ ಮೋದಿ ಮನ್ ಕಿ ಬಾತ್‌ನಲ್ಲಿ ಮಕ್ಕಳಿಗೆ ಕರೆ

೨. ಜವಳಿ ತ್ಯಾಜ್ಯ ಆವಿಷ್ಕಾರಕ ತಂತ್ರಜ್ಞಾನದಲ್ಲಿ ಬೆಂಗಳೂರು ಇತರ ನಗರಗಳಿಗೆ ಮಾದರಿ - ಪ್ರಧಾನಿ ಶ್ಲಾಘನೆ

೩. ಕುಡಿಯುವ ನೀರು ಹರಿಸುವಲ್ಲಿ ರೈತರ ಹಿತಕ್ಕೆ ಧಕ್ಕೆ ಆಗದಂತೆ ಅಗತ್ಯ ಕ್ರಮ - ಸಚಿವ ಶರಣಬಸಪ್ಪ ದರ್ಶನಾಪುರ ಭರವಸೆ

೪. ಹಿಂದೂಗಳ ಹೊಸವರ್ಷ ಯುಗಾದಿ ಹಬ್ಬ; ಎಲ್ಲೆಡೆ ಸಂಭ್ರಮದಿಂದ ಆಚರಣೆ

******************

ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯಮಿ ಇಂದು. ಚೈತ್ರ ನವರಾತ್ರಿ ಇಂದಿನಿಂದ ಪ್ರಾರಂಭವಾಗಲಿದ್ದು, ಈ ಬಾರಿ ವಿಕ್ರಮ ಸಂವತ್ಸರದ ಭಾರತೀಯ ನವ ವರ್ಷವೂ ಆರಂಭವಾಗುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ೧೨೦ನೇ ಸಂಚಿಕೆಯಲ್ಲಿ ತಿಳಿಸಿದ್ದಾರೆ.

ಪ್ರಧಾನಿ ಅವರು, ಕನ್ನಡ, ಮರಾಠಿ, ತೆಲುಗು, ಹಿಂದಿ ಸೇರಿದಂತೆ ಹಲವು ಭಾಷೆಗಳಲ್ಲಿ ಯುಗಾದಿ ಹಬ್ಬದ ಶುಭಾಶಯ ತಿಳಿಸಿದ್ದಾರೆ. ಹೊಸ ವರ್ಷವನ್ನು ಒಂದೊಂದು ರಾಜ್ಯದಲ್ಲಿ ಒಂದೊಂದು ರೀತಿಯಲ್ಲಿ ವಿಶಿಷ್ಟ ಹೆಸರುಗಳೊಂದಿಗೆ ಬರಮಾಡಿಕೊಳ್ಳುತ್ತಾರೆ.

ಇಂದು ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಯುಗಾದಿ, ಮಹಾರಾಷ್ಟ್ರದಲ್ಲಿ ಗುಡಿಪಾಡ್ವ ಹಬ್ಬವನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಅದೇ ರೀತಿ ಮುಂದಿನ ಕೆಲವು ದಿನಗಳಲ್ಲಿ, ಅಸ್ಸಾಂನಲ್ಲಿ 'ರೊಂಗಾಲಿ ಬಿಹು', ಬಂಗಾಳದಲ್ಲಿ 'ಪೊಯಿಲಾ ಬೋಯಿಶಾಖ್', ಕಾಶ್ಮೀರದಲ್ಲಿ 'ನವ್ರೇಹ್' ಹೆಸರಿನಲ್ಲಿ ನವ ವರ್ಷ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಈ ಸಂಭ್ರಮದ ವಾತಾವರಣದಲ್ಲಿಯೇ, ಈದ್ ಹಬ್ಬವೂ ಮೇಳೈಸಿದ್ದು, ಈ ತಿಂಗಳು ಪೂರ್ತಿ, ಹಬ್ಬಗಳು ಮತ್ತು ಆಚರಣೆಗಳಿಂದ ತುಂಬಿರಲಿವೆ. ನಮ್ಮ ಈ ಹಬ್ಬಗಳು ಬೇರೆ ಬೇರೆ ಪ್ರದೇಶಗಳಲ್ಲಿ ಆಚರಿಸಲ್ಪಡಬಹುದು ಆದರೆ, ಭಾರತದ ವೈವಿಧ್ಯತೆಯಲ್ಲಿಯೂ ಏಕತೆ ಹೇಗೆ ಬೆಸೆದುಕೊಂಡಿದೆ

ಎಂಬುದನ್ನು ಅವು ತೋರ್ಪಡಿಸುತ್ತವೆ. ಈ ಏಕತೆಯ ಭಾವವನ್ನು ಎಲ್ಲರೂ ನಿರಂತರವಾಗಿ ಬಲಪಡಿಸುತ್ತಾ ಸಾಗಬೇಕು ಎಂದು ಕರೆ ನೀಡಿದರು.

ಇಷ್ಟು ದಿನ ಮಕ್ಕಳಿಗೆ ಪರೀಕ್ಷೆಗಳ ಬಗ್ಗೆ ಸಲಹೆಗಳನ್ನು ಕೊಡಲಾಗುತ್ತಿತ್ತು, ಈಗ ಪರೀಕ್ಷೆಗಳು ಮುಗಿದಿವೆ ಬೇಸಿಗೆ ರಜೆ ಶುರುವಾಗುತ್ತಿದೆ.

ಹೊಸ ಹವ್ಯಾಸವನ್ನು ಅಳವಡಿಸಿಕೊಳ್ಳುವ ಜೊತೆಗೆ ತಮ್ಮ ಕೌಶಲ್ಯಗಳನ್ನು ಮತ್ತಷ್ಟು ಬೆಳೆಸಿಕೊಳ್ಳುವ ಸಮಯ ಇದು. ಇಂದು ಕಲಿಯಲು ಸಾಕಷ್ಟು ವೇದಿಕೆಗಳಿವೆ. ಕೇವಲ ಶಾಲೆಯಲ್ಲಿ ಮಾತ್ರ ಕಲಿಯಬೇಕು ಎಂದೇನಿಲ್ಲ. ಯಾವುದೇ ಶಾಲೆ, ಸಾಮಾಜಿಕ ಸಂಸ್ಥೆ ಅಥವಾ ಕೇಂದ್ರಗಳು ಬೇಸಿಗೆ ಚಟುವಟಿಕೆಗಳನ್ನು ಆಯೋಜಿಸುತ್ತಿದ್ದರೆ ಅದನ್ನು ಹಂಚಿಕೊಳ್ಳಿವಂತೆ ತಿಳಿಸಿದ್ದಾರೆ.

ಮಳೆ ಹನಿಗಳನ್ನು ಸಂರಕ್ಷಿಸುವ ಮೂಲಕ ನಾವು ಬಹಳಷ್ಟು ನೀರನ್ನು ವ್ಯರ್ಥ ಮಾಡುವುದನ್ನು ತಪ್ಪಿಸಬಹುದು. ದೇಶದ ಹಲವು ಭಾಗಗಳಲ್ಲಿ ನೀರಿನ ಸಂರಕ್ಷಣೆಗಾಗಿ ಅಭೂತಪೂರ್ವ ಕೆಲಸ ಮಾಡಲಾಗಿದೆ. ಕಳೆದ ೭ ರಿಂದ ೮ ವರ್ಷಗಳಲ್ಲಿ ೧೧ ಶತಕೋಟಿ ಘನ ಮೀಟರ್ ಮತ್ತು ಅದಕ್ಕಿಂತ ಹೆಚ್ಚಿನದನ್ನು ಹೊಸದಾಗಿ ನಿರ್ಮಿಸಲಾದ ಟ್ಯಾಂಕ್‌ಗಳು, ಕೊಳಗಳು ಮತ್ತು ಇತರ ನೀರಿನ ಪುನರ್ಭರ್ತಿ ರಚನೆಗಳ ಮೂಲಕ ನೀರನ್ನು ಸಂರಕ್ಷಿಸಲಾಗಿದೆ ಎಂದರು.

ಈ ನಿಟ್ಟಿನಲ್ಲಿ ರಾಜ್ಯದ ಗದಗ ಜಿಲ್ಲೆಯ ಜನರು ರೂಪಿಸಿರುವ ಒಂದು ಮಾದರಿ ಕುರಿತು ಮಾಹಿತಿ ಹಂಚಿಕೊಂಡ ಪ್ರಧಾನಿ, ಕೆಲವು ವರ್ಷಗಳ ಹಿಂದೆ, ಇಲ್ಲಿನ ಎರಡು ಹಳ್ಳಿಗಳ ಕೆರೆಗಳು ಸಂಪೂರ್ಣವಾಗಿ ಬತ್ತಿಹೋಗಿದ್ದವು. ಪ್ರಾಣಿಗಳಿಗೂ ಕುಡಿಯಲು ನೀರು ಇಲ್ಲದಂತಾಗಿತ್ತು. ಕ್ರಮೇಣ ಆ ಕೆರೆ, ಹುಲ್ಲು ಮತ್ತು ಕಸಕಡ್ಡಿಗಳಿಂದ ತುಂಬಿಹೋಯಿತು. ಆದರೆ ಕೆಲವು ಗ್ರಾಮಸ್ಥರು, 'ಮನಸ್ಸಿದ್ದಲ್ಲಿ ಮಾರ್ಗ' ಎಂಬ ಮಾತಿನಂತೆ ಕೆರೆ ಪುನರುಜ್ಜೀವನಗೊಳಿಸಲು ನಿರ್ಧರಿಸಿ, ಕಾರ್ಯ ಪ್ರವೃತ್ತರಾದರು. ಗ್ರಾಮಸ್ಥರ ಈ ಪ್ರಯತ್ನವನ್ನು ನೋಡಿ, ಸುತ್ತಮುತ್ತಲ ಸಾಮಾಜಿಕ ಸಂಸ್ಥೆಗಳು ಸಹ ಅವರೊಂದಿಗೆ ಕೈಜೋಡಿಸಿದವು. ಎಲ್ಲರೂ ಒಗ್ಗೂಡಿ ಕಸಕಡ್ಡಿ ಸ್ವಚ್ಛಗೊಳಿಸಿ, ಹೂಳೆತ್ತುವ ಕೆಲಸ ಮಾಡಿದರು.

ಕೆಲ ಸಮಯದ ನಂತರ ಕೆರೆ ಪ್ರದೇಶವು ಪುನರುಜ್ಜೀನಗೊಂಡಿತು ಎಂದು ಶ್ಲಾಘಿಸಿದರು. ನಿಜಕ್ಕೂ, ಇದು **`catch the rain'** ಅಭಿಯಾನದ ಒಂದು ಉತ್ತಮ ಉದಾಹರಣೆಯಾಗಿದೆ. ನೀವು ಕೂಡ ಸಮುದಾಯ ಮಟ್ಟದಲ್ಲಿ ಇಂತಹ ಪ್ರಯತ್ನಗಳಿಗೆ ಕೈಜೋಡಿಸಬಹುದು. ನಿಮ್ಮ ಮನೆಯ ಛಾವಣಿ ಅಥವಾ ಅಂಗಳದಲ್ಲಿ ಪಕ್ಷಿಗಳಿಗೆ ನೀರನ್ನು ಇರಿಸಿ ಎಂದು ಅವರು ಸಲಹೆ ನೀಡಿದರು.

ಕೆಲವು ದಿನಗಳ ಹಿಂದೆ ಮುಕ್ತಾಯಗೊಂಡ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟದಲ್ಲಿ, ಕೀಡಾಪಟುಗಳು ತೋರಿದ ಸಮರ್ಪಣೆ ಮತ್ತು ಪ್ರತಿಭೆಯ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿದ್ದಾರೆ. ಇದರಿಂದ ಪ್ಯಾರಾ ಸ್ಪೋರ್ಟ್ಸ್ ಎಷ್ಟು ಜನಪ್ರಿಯವಾಗುತ್ತಿದೆ ಎಂಬುದು ಇದರಿಂದ ತಿಳಿಯುತ್ತದೆ. ಈ ಪಂದ್ಯಗಳಲ್ಲಿ ನಮ್ಮ ವಿಕಲಚೇತನ ಆಟಗಾರರು ೧೮ ರಾಷ್ಟ್ರೀಯ

ದಾಖಲೆಗಳನ್ನು ಮಾಡಿದರು. ಅವುಗಳಲ್ಲಿ ೧೨ ಮಹಿಳಾ ಆಟಗಾರ್ತಿಯರ ಸಾಧನೆಯಾಗಿದೆ ಎಂದು ಅವರು ಹೇಳಿದರು.

'ಜವಳಿ ತ್ಯಾಜ್ಯ'. ಸವಾಲಿನ ಬಗ್ಗೆ ಮಾತನಾಡಿದ ಪ್ರಧಾನಿ, ವಾಸ್ತವದಲ್ಲಿ ಜವಳಿ ತ್ಯಾಜ್ಯ ಇಡೀ ವಿಶ್ವಕ್ಕೆ ಒಂದು ಹೊಸ ಚಿಂತೆಗೆ ಪ್ರಮುಖ ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ನೀವು ಧರಿಸದೇ ಬಿಟ್ಟ ಹಳೆಯ ಬಟ್ಟೆಗಳು ಜವಳಿ ತ್ಯಾಜ್ಯವಾಗಿ ಮಾರ್ಪಾಡಾಗುತ್ತಿವೆ. ಈ ವಿಷಯದ ಬಗ್ಗೆ ಅನೇಕ ಜಾಗತಿಕ ಸಂಶೋಧನೆಗಳು ನಡೆಯುತ್ತಿದ್ದು, ವಿಶ್ವದಲ್ಲಿ ಅತ್ಯಂತ ಹೆಚ್ಚು ಜವಳಿ ತ್ಯಾಜ್ಯ ಹೊರಬೀಳುವ ದೇಶಗಳ ಪೈಕಿ ಭಾರತ ಮೂರನೇ ಸ್ಥಾನದಲ್ಲಿದೆ.

ಬೆಂಗಳೂರು ಕೂಡಾ ಆವಿಷ್ಕಾರಕ ತಂತ್ರಜ್ಞಾನ ಪರಿಹಾರಗಳಿಂದ ತನ್ನದೇ ಆದ ಗುರುತು ಮೂಡಿಸುತ್ತಿದೆ. ಇಲ್ಲಿ ಅರ್ಧಕ್ಕಿಂತ ಹೆಚ್ಚು ಜವಳಿ ತ್ಯಾಜ್ಯವನ್ನು ಸಂಗ್ರಹಿಸಲಾಗುತ್ತಿದ್ದು, ಇತರ ನಗರಗಳಿಗೂ ಇಂದು ಒಂದು ಉದಾಹರಣೆಯಾಗಿದೆ ಎಂದು ಪ್ರಧಾನಿ ಶ್ಲಾಘಿಸಿದರು.

ಯೋಗ ದಿನಕ್ಕೆ ಈಗ ೧೦೦ ದಿನಗಳಿಗಿಂತ ಕಡಿಮೆ ಸಮಯ ಉಳಿದಿದೆ. ನೀವು ಇದುವರೆಗೂ ನಿಮ್ಮ ಜೀವನದಲ್ಲಿ ಯೋಗಾಬ್ಯಾಸ ಸೇರಿಸಿಕೊಂಡಿಲ್ಲವೆಂದಾದಲ್ಲಿ, ಈಗಲೇ ನಿಮ್ಮ ದಿನಚರಿಯಲ್ಲಿ ಯೋಗವನ್ನು ಸೇರಿಸಿಕೊಳ್ಳಿ, ೧೦ ವರ್ಷಗಳ ಹಿಂದೆ ೨೦೧೫ರ ಜೂನ್ ೨೧ ರಂದು ಪ್ರಥಮ ಯೋಗ ದಿನ ಆಚರಿಸಲಾಯಿತು. ಈಗ ದಿನವೂ ಯೋಗದ ಭವ್ಯ ಉತ್ಸವವಾಗಿ ರೂಪುಗೊಂಡಿದೆ. ೨೦೨೫ರ ಯೋಗ ದಿನದ ಘೋಷವಾಕ್ಯವೆಂದರೆ 'ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎನ್ನುವುದಾಗಿದೆ' ಇಡೀ ವಿಶ್ವವನ್ನು ಯೋಗದಿಂದ ಆರೋಗ್ಯ ಪೂರ್ಣವನ್ನಾಗಿ ಮಾಡಬೇಕೆಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು.

*******************

ಸರ್ಕಾರ ರೈತರ ಹಿತಕ್ಕೆ ಧಕ್ಕೆ ಆಗದಂತೆ ಅಗತ್ಯ ಕ್ರಮ ತೆಗೆದುಕೊಳ್ಳಲಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಭರವಸೆ ನೀಡಿದ್ದಾರೆ.

ಯಾದಗಿರಿ ಜಿಲ್ಲೆಯ ಶಹಾಪುರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಡಿಯುವ ನೀರಿಗಾಗಿ ಮಾನವೀಯತೆಯ ಮೇಲೆ ನಾವು ತೆಲಂಗಾಣ ರಾಜ್ಯಕ್ಕೆ ಕೃಷ್ಣಾ ನದಿಯ ಮೂಲಕ ಕೇವಲ ೧.೨೯ ಟಿಎಂಸಿ ಅಡಿ ಮಾತ್ರ ನೀರು ಹರಿಬಿಡಲಾಗಿದೆ. ಇದರ ಬಗ್ಗೆ ಅಪಪ್ರಚಾರ ಮಾಡುವುದು ಸರಿಯಲ್ಲ ಎಂದರು.

ಈಗಾಗಲೇ ಕುಡಿಯುವ ನೀರಿಗಾಗಿ ಮಾತ್ರ ಎರಡು ಜಲಾಶಯದಲ್ಲಿ ನೀರು ಸಂಗ್ರಹಿಸಿ ಇಡಲಾಗಿದೆ. ಮತ್ತೆ ಮೇ ತಿಂಗಳಲ್ಲಿ ಕಾಲುವೆ ಮೂಲಕ ನೀರು ಹರಿಸಬೇಕಾಗಿದೆ. ಅನವಶ್ಯಕವಾಗಿ ರೈತರಲ್ಲಿ ಗೊಂದಲ ಮೂಡಿ ಸುವುದನ್ನು ನಿಲ್ಲಿಸಿ. ವಾಸ್ತವ ಚಿತ್ರಣದ ಅಂಕಿ ಅಂಶಗಳನ್ನು ಸಾರ್ವಜನಿಕರ ಮುಂದೆ ಇಡಲಾಗಿದೆ ಎಂದು ತಿಳಿಸಿದರು.

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ಬಸವಸಾಗರ ಜಲಾಶಯದ ನಾರಾಯಣಪುರ ಎಡದಂಡೆ ಕಾಲುವೆಗೆ ನೀರು ಹರಿಸುವ ನಿರ್ಧಾರ ತೆಗೆದುಕೊಳ್ಳುವುದು ನೀರಾವರಿ ಸಚಿವರು ಹಾಗೂ ಮುಖ್ಯಮಂತ್ರಿ ಅವರ ಕೈಯಲ್ಲಿದೆ ಎಂದು ಹೇಳಿದರು.

******************

ಹಿಂದೂಗಳ ಪವಿತ್ರ ಹಬ್ಬವಾದ ಯುಗಾದಿಯನ್ನು ಇಂದು ರಾಜ್ಯದ್ಯಂತ ಸಡಗರದಿಂದ ಆಚರಿಸಲಾಗುತ್ತಿದ್ದು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಭ್ರಮದಿಂದ ಹಬ್ಬವನ್ನು ಆಚರಿಸಲಾಗುತ್ತಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಅತ್ಯಂತ ಶ್ರದ್ಧಾಭಕ್ತಿ ಹಾಗೂ ಸಡಗರಗಳಿಂದ ಹಬ್ಬವನ್ನು ಆಚರಿಸಲಾಗುತ್ತಿದೆ.

ಚೈತ್ರ ಮಾಸದ ಮೊದಲ ಹಬ್ಬವಾದ ಯುಗಾದಿ ಜಿಲ್ಲೆಯಲ್ಲಿ ಕಳೆಗಟ್ಟಿದ್ದು, ಮರಗಿಡಗಳಲ್ಲಿನ ಹೊಸ ಚಿಗುರು  ಹೊಸ ಚೈತನ್ಯ ತಂದಿದೆ.  ಬಿಸಿಲಿನ ತಾಪದ ನಡುವೆಯೂ ಯುಗಾದಿ ಹಬ್ಬವನ್ನು ಅತ್ಯಂತ ಉತ್ಸಾಹದಿಂದ ಆಚರಿಸಲಾಗುತ್ತಿದೆ.

ಹಬ್ಬದ ಪ್ರಯುಕ್ತ ದೇವಾಲಯಗಳಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸುವ ಜೊತೆಗೆ ಕುಟುಂಬದವರು, ಸ್ನೇಹಿತರು, ಆತ್ಮೀಯರು ಮತ್ತು ನೆರೆ ಹೊರೆಯವರಿಗೆ ಬೇವು ಬೆಲ್ಲ ಹಂಚಿ ಪರಸ್ಪರ ಯುಗಾದಿ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು.

ಚಿತ್ರದುರ್ಗ ಜಿಲ್ಲೆಯಲ್ಲಿ ವರ್ಷದ ಮೊದಲ ಹಬ್ಬ ಯುಗಾದಿಯನ್ನು  ಸಂಭ್ರಮದಿಂದ ಆಚರಿಸಲಾಯಿತು.

ಹಿಂದುಗಳ ಹೊಸ ವರ್ಷ ಆರಂಭದ ಈ ಮೊದಲ ದಿನವನ್ನು ಸಮಸ್ತ ನಾಗರೀಕರು ಸಾಂಪ್ರದಾಯಿಕವಾಗಿ ಆಚರಿಸಿತ್ತಿದ್ದು, ಮನೆಗಳಿಗೆ ಮಾವು ಮತ್ತು ಬೇವಿನ ಎಲೆಯ ತೋರಣದಿಂದ ಸಿಂಗರಿಸಲಾಗಿದೆ. ಮನೆಮಂದಿ ಎಲ್ಲ ಅಭ್ಯಂಜನ ಸ್ನಾನ ಮಾಡಿ ಹೊಸಬಟ್ಟೆ ತೊಟ್ಟು ದೇವರಿಗೆ ಪೂಜೆ ಸಲ್ಲಿಸಿ ನಂತರ ಹಿರಿಯರ ಆಶೀರ್ವಾದ ಪಡೆಯುವ ದೃಶ್ಯ ಸಾಮಾನ್ಯವಾಗಿದೆ.  ನೆರೆ ಹೊರೆ ಮತ್ತು ಸಂಭಂಧಿಕರಿಗೆ ಹಿತೈಶಿಗಳಿಗೆ ಬೇವು ಬೆಲ್ಲ ಹಂಚಿ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಳ್ಳಲಾಯಿತು.

ಕೋಲಾರ ಜಿಲ್ಲೆಯಾದ್ಯಂತ ವರ್ಷದ ಮೊದಲ ಹಬ್ಬ ಯುಗಾದಿಯನ್ನು  ಸಂಭ್ರಮ ಶ್ರಧ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ.

ಮನೆಗಳಿಗೆ ಮಾವು ಮತ್ತು ಬೇವಿನ ಎಲೆಯ ತಳಿರು ತೋರಣದಿಂದ ಸಿಂಗರಿಸಲಾಗಿದೆ. ಹೂ ಹಣ್ಣುಗಳ ಬೆಲೆ ಗಗನಕ್ಕೇರಿದ್ದರೂ ಮಾರುಕಟ್ಟೆಯಲ್ಲಿ ಗ್ರಾಹಕರು ಖರೀದಿ ಜೋರಾಗಿಯೇ ನಡೆದಿದೆ. ಕೋಲಾರದ ಎಂ.ಜಿ.ರಸ್ತೆ, ಹಳೇ ಬಸ್ ನಿಲ್ದಾಣ ಸಮೀಪ ಕೆಲ ಕಾಲ ಸಂಚಾರ ದಟ್ಟಣೆ ಉಂಟಾಗಿತ್ತು.

ವಾಣಿಜ್ಯ ನಗರಿ ದಾವಣಗೆರೆ ಸೇರಿದಂತೆ ಜಿಲ್ಲಾದ್ಯಂತ ಯುಗಾದಿ ಸಂಭ್ರಮ ಮನೆ ಮಾಡಿದೆ. ತಳಿರು ತೋರಣಗಳಿಂದ ಮನೆಗಳನ್ನು ಅಲಂಕರಿಸಲಾಗಿದ್ದು, ಅಭ್ಯಂಜನ ಸ್ನಾನ ಮಾಡಿ ಹೊಸಬಟ್ಟೆ ತೊಟ್ಟು ದೇವಾಲಯಗಳಿಗೆ ಜನರು ಭೇಟಿ ನೀಡುತ್ತಿರುವುದು ಎಲ್ಲೆಡೆ ಕಂಡು ಬರುತ್ತಿದೆ. ಈ ಮಧ್ಯೆ ಬಿಸಿಲು ಹೆಚ್ಚಾದ ಪರಿಣಾಮ ಜನರು ಹಣ್ಣುಗಳನ್ನು ಹೆಚ್ಚಾಗಿ ಖರೀದಿ ಮಾಡಲು ಮಾರುಕಟ್ಟೆಗೆ ಲಗ್ಗೆ ಇಟ್ಟಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಯುಗಾದಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆ ನಡುವೆಯೂ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ನೆಲಮಂಗಲ, ಹೊಸಕೋಟೆ ತಾಲೂಕುಗಳಲ್ಲಿ ಜನತೆ ಮನೆಯ ಬಾಗಿಲುಗಳನ್ನು ತಳಿರು ತೋರಣಗಳಿಂದ ಶೃಂಗರಿಸಿ, ಮನೆಯ ಮುಂದೆ ಶುಭಾಶಯ ಕೋರುವ ರಂಗೋಲಿಗಳ ಚಿತ್ತಾರ ಬಿಡಿಸಿದ್ದಾರೆ.

******************

ಯಾದಗಿರಿ ಜಿಲ್ಲೆಯ ಶಹಾಪುರ ಮತ ಕ್ಷೇತ್ರದಾದ್ಯಂತ ವಿವಿಧ ಗ್ರಾಮಗಳ ರಸ್ತೆ ಸುಧಾರಣೆಗೆ ಆದ್ಯತೆ ನೀಡುವ ಮೂಲಕ ಸುಮಾರು ೨೨ ಕೋಟಿ ೫೦ ಲಕ್ಷ ರೂಪಾಯಿ ವೆಚ್ಚದ ರಸ್ತೆ ಕಾಮಗಾರಿ ಕೈಗೊಂಡು ಜನಸಂಚಾರಕ್ಕೆ ಮುಕ್ತಗೊಳಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದ್ದಾರೆ.

ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನಲ್ಲಿ ರಸ್ತೆ ಕಾಮಗಾರಿಯನ್ನು ವೀಕ್ಷಿಸಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನದಲ್ಲಿ ವನದುರ್ಗದಿಂದ ಶೆಟ್ಟಿಕೇರಾವರೆಗೆ ೬ ಕೋಟಿ ೫ ಲಕ್ಷ ರೂಪಾಯಿ ವೆಚ್ಚದ ೫.೪ ಕಿಲೋಮೀಟರ್ ರಸ್ತೆ ಕಾಮಗಾರಿ ಮುಕ್ತಾಯಗೊಂಡಿದೆ ಎಂದು ಅವರು ತಿಳಿಸಿದರು.

**********ಮುಕ್ತಾಯ********